# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ವಾರ್ಡ್ ಸಂಖ್ಯೆ 10/ಸಭೆ/ಪಿಆರ್/19/2020-21 ದಿನಾಂಕ: 03/07/2021.

**ಮಾನ್ಯ ಆಯುಕ್ತರು ರವರ ಸುತ್ತೋಲೆ ಸಂಖ್ಯೆ ಬಿ12(5)/ಪಿ.ಆರ್/35/2020-21 ದಿನಾಂಕ 21/09/2020ರ ಆದೇಶದ ಅನ್ವಯ ವಾರ್ಡ್ ನಂ.10 ದೊಡ್ಡಬೊಮ್ಮಸಂದ್ರ ವಾರ್ಡ್ ಕಛೇರಿಯಲ್ಲಿ ದಿನಾಂಕ: 03/07/2021 ರಂದು ನೋಡೆಲ್ ಅಧಿಕಾರಿ ರವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ Deter Committe ಹಾಗೂ ವಾರ್ಡ್ ಸಮಿತಿ ಸಭೆಯ ನಡವಳಿಗಳು**

**ಹಾಜರಿದ್ದ ಅಧಿಕಾರಿ/ಸದಸ್ಯರು**

1. ಶ್ರೀ ಜಿ.ಶ್ರೀನಿವಾಸಮೂರ್ತಿ, ನೋಡಲ್ ಅಧಿಕಾರಿ ಹಾಗೂ ಸ.ಕಾ.ಅ, ಕೊಡಿಗೇಹಳ್ಳಿ ಉಪವಿಭಾಗ
2. ಶ್ರೀಮತಿ. ಶ್ವೇತಾ ಎನ್.ಆರ್, ಸಹಾಯಕ ಅಭಿಯಂತರರು
3. ಶ್ರೀಮತಿ ಡಾ ॥ ಶೋಭ ನಾಗೇಶ್, ಆರೋಗ್ಯ ವೈದ್ಯಾಧಿಕಾರಿ
4. ಶ್ರೀ ಮಂಜುನಾಥ್, ಕಿರಿಯ ಆರೋಗ್ಯ ಪರಿವೀಕ್ಷಕರು
5. ಶ್ರೀ ರೇಣುಕಾ ಪ್ರಸಾದ್, ಬಿ.ಡಬ್ಲ್ಯು.ಎಸ್.ಎಸ್.ಬಿ. ಸಿಬ್ಬಂದಿ
6. ಶ್ರೀ ಗೋಪಾಲ್‌ಕೃಷ್ಣ, ಸದಸ್ಯರು
7. ಶ್ರೀ ಮಲ್ಯಾದ್ರಿ, ಸದಸ್ಯರು

**ಶ್ರೀ ಜಿ. ಶ್ರೀನಿವಾಸಮೂರ್ತಿ, ನೋಡಲ್ ಅಧಿಕಾರಿ:-** ಸಭೆಗೆ ಹಾಜರಿದ್ದ ಅಧಿಕಾರಿ ಹಾಗೂ ಸದಸ್ಯರನ್ನು ಪರಿಚಯ ಮಾಡಿಕೊಳ್ಳುವುದರ ಮುಖಾಂತರ ಸ್ವಾಗತವನ್ನು ಕೋರಿದರು ಹಾಗೂ ವಾರ್ಡಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಚರ್ಚಿಸಲು ಎಲ್ಲರನ್ನು ಕೋರಿ ಸಭೆಯಲ್ಲಿ ನಡೆಯುವ ನಡವಳಿಗಳನ್ನು ನಮೂದಿಸಲು ತಿಳಿಸಿದರು.

**ಶ್ರೀಮತಿ ಡಾ॥ ಶೋಭ ನಾಗೇಶ್, ಆರೋಗ್ಯ ವೈದ್ಯಾಧಿಕಾರಿ:-**

- ವಾರ್ಡ್ ವ್ಯಾಪ್ತಿಯಲ್ಲಿ ಪಾಸಿಟಿವ್ ಕೇಸ್ ಕಡಿಮೆಯಾಗುತ್ತಿದ್ದು, ಆದರೆ, ಡೆಲ್ಟಾ ವೈರಸ್ ಬರುವ ಸಾಧ್ಯತೆ ಇರುವುದರಿಂದ ಸಾರ್ವಜನಿರಕು ಇದೇ ರೀತಿ ಸರ್ಕಾರದ ಮಾರ್ಗಸೂಚಿಗಳನ್ನು ಅನುಸರಿಸಲು ತಿಳಿಸಿದರು. ಮತ್ತು ಕಡ್ಡಾಯವಾಗಿ ಮಾಸ್ಕ್ ಧರಿಸಬೇಕು, ಆಗಾಗ ಕೈತೊಳೆಯಬೇಕು ಹಾಗೂ 6 ಅಡಿ ಅಂತರ ಕಾಪಾಡುವುದು ಅವಶ್ಯಕವಾಗಿರುತ್ತದೆ ಮತ್ತು ಅವಶ್ಯ ಸಂದರ್ಭದಲ್ಲಿ ಮಾತ್ರ ಮನೆಯಿಂದ ಹೊರಗೆ ಬರಬೇಕೆಂದು ತಿಳಿಸಿರುತ್ತಾರೆ. ಎಂದು ಸಭೆಗೆ ತಿಳಿಸಿದರು.
- ವಾರ್ಡಿನಲ್ಲಿ ಈಗಾಗಲೇ 30,000 ವ್ಯಾಕ್ಸಿನೇಷನ್ ಆಗಿರುತ್ತದೆ ಎಂದು ತಿಳಿಸಿದರು. ಮತ್ತು ಟೆಸ್ಟಿಂಗ್‌ಗೆ ಸಾರ್ವಜನಿಕರು ಬರುತ್ತಿರುವುದಿಲ್ಲವಾದ್ದರಿಂದ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಕ್ರಮವಹಿಸುವಂತೆ ಕೋರಿದರು.
- ದೊಡ್ಡಬೊಮ್ಮಸಂದ್ರ ಸರ್ಕಾರಿ ಶಾಲೆಯಲ್ಲಿ, ರಾಮಚಂದ್ರ ಸರ್ಕಾರಿ ಶಾಲೆಯಲ್ಲಿ ಹಾಗೂ ತಿಂಡ್ಲು ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ವ್ಯಾಕ್ಸಿನ್ ಕೇಂದ್ರ ಸ್ಥಾಪಿಸಲಾಗಿದ್ದು, ಸರ್ಕಾರದ ನಿರ್ದೇಶನದಂತೆ 18 ವರ್ಷಕ್ಕಿಂತ ಮೇಲ್ಪಟ್ಟ ಎಲ್ಲರು ವ್ಯಾಕ್ಸಿನ್ ಹಾಕಿಸಿಕೊಳ್ಳಬೇಕಾಗಿ

ಕೋರಿದರು. ಹಾಗೂ ಲಿಸಿಕೆ ನೀಡುವ ಕೇಂದ್ರಗಳ ಮಾಹಿತಿಯನ್ನು ಪ್ರತಿನಿತ್ಯ ವಾಟ್ಸಪ್ ಗ್ರೂಪ್‌ಗಳಲ್ಲಿ ತಿಳಿಸಲಾಗುತ್ತಿರುತ್ತದೆ.

- ಸಾರ್ವಜನಿಕರು ವ್ಯಾಕ್ಸಿನ್ ಪಡೆಯಲು ಜಾಗ್ರತಿ ಮೂಡಿಸಲು ಆಟೋ ಮುಖಾಂತರ ಪ್ರಚಾರ ಮಾಡಲು ಕ್ರಮವಹಿಸಲಾಗಿದೆ.

**ಸದಸ್ಯರುಗಳು ಹಾಗೂ ಸಾರ್ವಜನಿಕರು:-**

ವಾರ್ಡ್ ನಂ 10 ರ ವ್ಯಾಪ್ತಿಯಲ್ಲಿ ಬರುವ ಸುಬ್ಬಣ್ಣ ಲೇಔಟ್, ನಂಜಪ್ಪ ಲೇಔಟ್, ಬೈರಪ್ಪ ಗಾರ್ಡನ್, ಆರ್.ಆರ್. ಸ್ಕೂಲ್ ಹತ್ತಿರ ಸಿ.ಎಮ್.ಸಿ. ನೀರನ್ನು ದಿನಬಿಟ್ಟು ದಿನ ಸರಬರಾಜು ಮಾಡಲು ಕೋರಿರುತ್ತಾರೆ. ಗ್ಯಾಸ್ ಗೋಡಾನ್ ರಸ್ತೆ ಹಾಗೂ ಅಪೂರ್ವ ಅಪಾರ್ಟ್‌ಮೆಂಟ್ ಹತ್ತಿರ ಸಿ.ಎಮ್.ಸಿ. ನೀರಿನಲ್ಲಿ ಕಂಟಾಮಿನೇಷನ್ ಆಗುತ್ತಿದ್ದು, ಇದನ್ನು ದುರಸ್ಥಿ ಮಾಡಿಸಲು ಕೋರಿರುತ್ತಾರೆ. ರಾಜಬೀದಿ ರಸ್ತೆಯಲ್ಲಿ ಕಾವೇರಿ ನೀರು ಬರುತ್ತಿರುವುದಿಲ್ಲ. ಹಾಗೂ ವಾರ್ಡ್ ವ್ಯಾಪ್ತಿಯಲ್ಲಿ ಸುಮಾರು ಬೋರ್‌ವೆಲ್‌ಗಳು ದುರಸ್ಥಿಯಲ್ಲಿದ್ದು, ಸದರಿ ಬೋರ್‌ವೆಲ್‌ಗಳನ್ನು ಸರಿಪಡಿಸಲು ಮತ್ತು ಮೇಲ್ಕಂಡ ದೂರುಗಳ ಮೇಲೆ ತುರ್ತಾಗಿ ಕ್ರಮಕೈಗೊಳ್ಳಲು ಸಾರ್ವಜನಿಕರು ಕೋರಿದ್ದು, ಅದರಂತೆ ಸಭೆಗೆ ಹಾಜರಿದ್ದ ಶ್ರೀ ರೇಣುಕಾ ಪ್ರಸಾದ್, ಬಿ.ಡಬ್ಲ್ಯು.ಎಸ್.ಎಸ್.ಬಿ. ಸಿಬ್ಬಂದಿಯವರು ಕ್ರಮಕೈಗೊಳ್ಳುವುದಾಗಿ ತಿಳಿಸಿರುತ್ತಾರೆ.

ಈ ಮೇಲ್ಕಂಡ ಅಂಶಗಳ ಬಗ್ಗೆ ಸಭೆಯಲ್ಲಿ ಉಪಸ್ಥಿತರಿದ್ದ ಅಧಿಕಾರಿಗಳು ಹಾಗೂ ಸದಸ್ಯರೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯ ಗೊಳಿಸಲಾಯಿತು.

ನೋಡೆಲ್ ಅಧಿಕಾರಿ ವಾರ್ಡ್-10 ಹಾಗೂ
ಸಹಾಯಕ ಕಾರ್ಯಪಾಲಕ ಅಭಿಯಂತರರು
ಕೊಡಿಗೇಹಳ್ಳಿ ಉಪವಿಭಾಗ

**ಪ್ರತಿಯನ್ನು:**

1. ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮಾನ್ಯ ಜಂಟಿ ಆಯುಕ್ತರು, ಯಲಹಂಕ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
3. ಆರೋಗ್ಯಾಧಿಕಾರಿಗಳು, ಯಲಹಂಕ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
4. ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯಾರಣ್ಯಪುರ ಉಪವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.
6. ಕಾರ್ಯದರ್ಶಿ ಹಾಗೂ ಸಂಚಾಲಕರು, ವಾರ್ಡ್ ಕಮಿಟಿ ರವರ ಮಾಹಿತಿಗಾಗಿ ಸಲ್ಲಿಸಿದೆ.
7. ವಾರ್ಡ್ ಕಮಿಟಿ ಸದಸ್ಯರುಗಳ ಮಾಹಿತಿಗಾಗಿ ಸಲ್ಲಿಸಿದೆ.
8. ಕಛೇರಿ ಕಡತಕ್ಕೆ.